# ಕರ್ನಾಟಕ ಸರ್ಕಾರ ಕಾರ್ಮಿಕ ಇಲಾಖೆ

ಸಂ: ಪಿ&ಎಸ್/ಎನ್ಎಫ್‌ಹೆಚ್/ಸಿಆರ್-1/2018-19

ಕಾರ್ಮಿಕ ಆಯುಕ್ತರ ಕಚೇರಿ
'ಕಾರ್ಮಿಕ ಭವನ' ಬನ್ನೇರುಘಟ್ಟ ರಸ್ತೆ
ಬೆಂಗಳೂರು-29 - ದಿನಾಂಕ: 05.06.2018

## ಸುತ್ತೋಲೆ

**ವಿಷಯ : ದಿನಾಂಕ 08.06.2018 ರಂದು ಪದವೀಧರ ಹಾಗೂ ಶಿಕ್ಷಕರ ಕ್ಷೇತದ ಚುನಾವಣೆಯ ದಿನದಂದು ರಾಜ್ಯಾದಾದ್ಯಂತ ಅರ್ಹ ಪದವೀದರ ಮತದಾರರಿಗೆ ಮತ ಚಲಾಯಿಸಲು ವೇತನ ಸಹಿತ ರಜೆಯನ್ನು ಘೋಷಿಸುವ ಬಗ್ಗೆ.**

**ಉಲ್ಲೇಖ : (1) ಸರ್ಕಾರದ ಪತ್ರ ಸಂಖ್ಯೆ: ಕಾಇ 213 ಎಲ್ಇಟಿ 2018 ದಿನಾಂಕ: 04-06-2018**
**(2) ಮುಖ್ಯ ಚುನಾವಣಾಧಿಕಾರಿಯವರ ಪತ್ರ ಸಂಖ್ಯೆ: ಸಿಆಸುಇ 01 ಚುರಘೋ 2018 ದಿನಾಂಕ : 01-06-2018**

= = =

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಭಾರತ ಚುನಾವಣಾ ಆಯೋಗವು ಕರ್ನಾಟಕ ವಿಧಾನ ಪರಿಷತ್ತಿನ ಪದವೀಧರ ಹಾಗೂ ಶಿಕ್ಷಕರ ಕ್ಷೇತ್ರದ ಚುನಾವಣೆಯನ್ನು ದಿನಾಂಕ: 08-06-2018 ರಂದು ಘೋಷಿಸಿರುತ್ತದೆ.

ದಿನಾಂಕ: 08-06-2018ರ ಮತದಾನದಂದು ಹೆಚ್ಚಿನ ಸಂಖ್ಯೆಯಲ್ಲಿ ಮತದಾನ ಮಾಡಲು ಅನುಕೂಲವಾಗುವಂತೆ ರಾಜ್ಯದ ಎಲ್ಲಾ ಶಿಕ್ಷಕರು ಮತ್ತು ಪದವೀಧರ ಮತದಾರರುಗಳಿಗೆ ಸಂಬಂಧಪಟ್ಟ ಅಂಗಡಿಗಳು, ವಾಣಿಜ್ಯ ಸಂಸ್ಥೆಗಳು, ಕಾರ್ಖಾನೆಗಳು ಮತ್ತು ಇತರೆ ಸಂಸ್ಥೆಗಳು 1963ರ ಕರ್ನಾಟಕ ಔದ್ಯೋಗಿಕ ಸಂಸ್ಥೆಗಳ (ರಾಷ್ಟ್ರೀಯ ಹಾಗೂ ಹಬ್ಬದ ರಜಾದಿನಗಳು) ಕಾಯ್ದೆಯ ಕಲಂ 3-ಎ ಪ್ರಕಾರ ಅರ್ಹ ಮತದಾರರಾಗಿರುವ ಕಾರ್ಮಿಕರಿಗೆ ಮತ ಚಲಾಯಿಸಲು ಅವಕಾಶ ಮಾಡಿ ಕೊಡಬೇಕಾಗುತ್ತದೆ.

ಆದ್ದರಿಂದ ಕರ್ನಾಟಕ ವಿಧಾನ ಪರಿಷತ್ತಿನ ಪದವೀಧರ ಹಾಗೂ ಶಿಕ್ಷಕರ ಕ್ಷೇತ್ರದ ಚುನಾವಣೆಗೆ ಮತ ಚಲಾಯಿಸಲು ಅರ್ಹರಿರುವ ಎಲ್ಲಾ ಮತದಾರರುಗಳಿಗೆ ದಿನಾಂಕ: 08.06.2018 (ಶುಕ್ರವಾರ) ರಂದು ವೇತನ ಸಹಿತ ರಜೆ ನೀಡಿ, ಎಲ್ಲಾ ಅರ್ಹ ಕಾರ್ಮಿಕರಿಗೆ ಸಂವಿಧಾನಾತ್ಮಕ/ಶಾಸನಾತ್ಮಕ ಹಕ್ಕಾದ ಮತವನ್ನು ಕಾನೂನಿನನ್ವಯ ಚಲಾಯಿಸಲು ಅನುವು ಮಾಡಿಕೊಡಲು ಸೂಚಿಸಲಾಗಿದೆ.

ಈ ವಿಷಯದಲ್ಲಿ ಯಾವುದೇ ಕಾರ್ಮಿಕರಿಗೆ ಸಂವಿಧಾನಾತ್ಮಕ/ಶಾಸನಾತ್ಮಕ ಹಕ್ಕಾದ ಮತವನ್ನು ಚಲಾಯಿಸಲು ರಜೆ ನೀಡದೆ ಹಾಗೂ ಮತದ್ಥಾನಕ್ಕೆ ಅವಕಾಶ ಮಾಡಿಕೊಡದಿದ್ದಲ್ಲಿ ಅಂತಹ ಅಂಗಡಿಗಳು, ವಾಣಿಜ್ಯ ಸಂಸ್ಥೆಗಳು, ಕಾರ್ಖಾನೆಗಳು ಮತ್ತು ಇತರೆ ಸಂಸ್ಥೆಗಳ ವಿರುದ್ಧ 1963ರ ಕರ್ನಾಟಕ ಕೈಗಾರಿಕಾ ಸಂಸ್ಥೆಗಳ (ರಾಷ್ಟ್ರೀಯ ಹಾಗೂ ಹಬ್ಬದ ದಿನಗಳು) ಕಾಯ್ದೆಯ ಕಲಂ 3-ಎ ರಡಿಯಲ್ಲಿ ಹಾಗೂ 1951ರ ಪ್ರಜಾಪ್ರಾತಿನಿಧ್ಯ ಕಾಯ್ದೆಯ ಕಲಂ 135(ಬಿ)ರಡಿಯಲ್ಲಿ ಕಾನೂನು ಕ್ರಮ ಜರುಗಿಸಲಾಗುವುದು.

06/06/18

ದಿನಾಂಕ: 08-06-2018ರ ಮತದಾನದಂದು ಹೆಚ್ಚಿನ ಸಂಖ್ಯೆಯಲ್ಲಿ ಮತದಾನ ಮಾಡಲು ಅನುಕೂಲವಾಗುವಂತೆ ರಾಜ್ಯದ ಎಲ್ಲಾ ಅರ್ಹ ಮತದಾರರುಗಳಿಗೆ ಸಂಬಂಧಪಟ್ಟ ಅಂಗಡಿಗಳು, ವಾಣಿಜ್ಯ ಸಂಸ್ಥೆಗಳು, ಕಾರ್ಖಾನೆಗಳು ಮತ್ತು ಇತರೆ ಸಂಸ್ಥೆಗಳ ಗಮನಕ್ಕೆ ತಂದು ಸಕಲ ಕ್ರಮಗಳನ್ನು ಕೈಗೊಳ್ಳಲು ಹಾಗೂ ಸರ್ಕಾರದ ಆದೇಶಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ಈ ಮೂಲಕ ಸಂಬಂಧಪಟ್ಟ ಅಧಿಕಾರಿಗಳು/ನಿರೀಕ್ಷಕರುಗಳಿಗೆ ಸೂಚಿಸಲಾಗಿದೆ.

Chaitra V 06/06/18

ಆಯುಕ್ತರು
ಕಾರ್ಮಿಕ ಇಲಾಖೆ,
ಕರ್ನಾಟಕ ಸರ್ಕಾರ

ಗೆ:

ಆಡಳಿತವರ್ಗ, ಎಲ್ಲಾ ಅಂಗಡಿಗಳು, ವಾಣಿಜ್ಯ ಸಂಸ್ಥೆಗಳು, ಕಾರ್ಖಾನೆಗಳು ಮತ್ತು ಇತರೆ ಸಂಸ್ಥೆಗಳು

ಪ್ರತಿಯನ್ನು ಸೂಕ್ತ ಕ್ರಮಕ್ಕಾಗಿ

1) ಎಲ್ಲಾ ಉಪ ಕಾರ್ಮಿಕ ಆಯುಕ್ತರುಗಳು
2) ಎಲ್ಲಾ ಸಹಾಯಕ ಕಾರ್ಮಿಕ ಆಯುಕ್ತರುಗಳು
3) ಎಲ್ಲಾ ಕಾರ್ಮಿಕ ಅಧಿಕಾರಿಗಳು,

→ ತಮ್ಮ ಅಧೀನದಲ್ಲಿ ಬರುವ ಎಲ್ಲಾ ಹಿರಿಯ ಕಾರ್ಮಿಕ ನಿರೀಕ್ಷಕರು / ಕಾರ್ಮಿಕ ನಿರೀಕ್ಷಕರುಗಳಿಗೆ ಸೂಚಿಸುವುದು

ಪ್ರತಿಯನ್ನು ಮಾಹಿತಿಗಾಗಿ :

1) ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು
2) ಮುಖ್ಯ ಚುನಾವಣಾಧಿಕಾರಿಗಳು, ನಿರ್ವಾಚನ ನಿಲಯ, ಶೇಷಾದ್ರಿ ರಸ್ತೆ, ಬೆಂಗಳೂರು
3) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ವಿಧಾನಸೌಧ, ಬೆಂಗಳೂರು
4) ಸರ್ಕಾರದ ಕಾರ್ಯದರ್ಶಿ, ಕಾರ್ಮಿಕ ಇಲಾಖೆ, ವಿಕಾಸಸೌಧ, ಬೆಂಗಳೂರು
5) ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು
6) ಅಪರ ಕಾರ್ಮಿಕ ಆಯುಕ್ತರು (ಆಡಳಿತ / ಕೈಗಾರಿಕಾ ಬಾಂಧವ್ಯ), ಬೆಂಗಳೂರು
7) ಜಂಟಿ ಕಾರ್ಮಿಕ ಆಯುಕ್ತರು (ಕನಿಷ್ಠ ವೇತನ), ಬೆಂಗಳೂರು